# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

## ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>**Part – I** | ಬೆಂಗಳೂರು, ಗುರುವಾರ ೨೭, ನವೆಂಬರ್, ೨೦೨೫ ( ಮಾರ್ಗಶಿರಾ , ೦೬, ಶಕವರ್ಷ, ೧೯೪೭)<br>**BENGALURU, THURSDAY 27, NOVEMBER, 2025 (MARGASHIRA , 06, SHAKAVARSHA, 1947)** | ನಂ. ೭೫೯<br>**No. 759** |
|---|---|---|

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿ., ಬೆಂಗಳೂರು ಈ ಸಂಸ್ಥೆಗೆ 2025-30 ರ ಅವಧಿಗೆ ಸಂಬಂಧಿಸಿದಂತೆ ದಿನಾಂಕ: 17-12-2025 ರಂದು ಜರುಗಲಿರುವ ಆಡಳಿತ ಮಂಡಳಿಯ ಚುನಾವಣೆಯನ್ನು ಮುಂದೂಡುವ ಕುರಿತು.

**ಓದಲಾಗಿದೆ:** ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಗೃಹ ಕಛೇರಿ ಕೃಷ್ಣಾದಲ್ಲಿ ದಿನಾಂಕ:25-11-2025 ರಂದು ನಡೆದ ಸಭೆಯಲ್ಲಿನ ತೀರ್ಮಾನದಂತೆ.

***********

**ಪ್ರಸ್ತಾವನೆ :**

2025-30 ರ ಅವಧಿಗೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕಿನ ಆಡಳಿತ ಮಂಡಳಿಯ ಚುನಾವಣೆಯು ದಿನಾಂಕ:17-12-2025ರಂದು ನಡೆಯಲಿದೆ. ಆದರೆ, ರಾಜ್ಯದಲ್ಲಿರುವ 183 ಪಿಕಾರ್ಡ್ ಬ್ಯಾಂಕುಗಳ ಪೈಕಿ 60 ಪಿಕಾರ್ಡ್ ಬ್ಯಾಂಕುಗಳು ಮಾತ್ರ ಚುನಾವಣೆಯಲ್ಲಿ ಭಾಗವಹಿಸಲು ಅರ್ಹತೆ ಹೊಂದಿದ್ದು, 123 ಪಿಕಾರ್ಡ್ ಬ್ಯಾಂಕುಗಳು ವಿವಿಧ ಕಾರಣಗಳಿಂದಾಗಿ ಚುನಾವಣೆಯಲ್ಲಿ ಭಾಗವಹಿಸಲು ಅರ್ಹತೆಯನ್ನು ಪಡೆದುಕೊಂಡಿರುವುದಿಲ್ಲ. ಅನರ್ಹತೆಗೊಂಡಿರುವ ಪಿಕಾರ್ಡ್ ಬ್ಯಾಂಕುಗಳು ಚುನಾವಣೆಯಲ್ಲಿ ಭಾಗವಹಿಸಲು ಬೇಕಾಗಿರುವ ಎಲ್ಲಾ ಅರ್ಹತೆಗಳನ್ನು ಹೊಂದಿ ಚುನಾವಣೆಯಲ್ಲಿ ಭಾಗವಹಿಸಲು ಅನುವಾಗಲು ಸಮಯಾವಕಾಶ ನೀಡುವುದು ಸೂಕ್ತವೆಂದು ಮತ್ತು ಎಲ್ಲಾ ಜಿಲ್ಲೆಗಳಿಗೆ ಪ್ರಜಾಸತ್ತಾತ್ಮಕವಾಗಿ ಪ್ರಾತಿನಿಧ್ಯ ನೀಡಲು ಅವಕಾಶ ಕಲ್ಪಿಸುವ ಹಿತದೃಷ್ಟಿಯಿಂದ ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಗೃಹ ಕಛೇರಿ ಕೃಷ್ಣಾದಲ್ಲಿ ದಿನಾಂಕ:25-11-2025ರಂದು ಜರುಗಿದ ಸಭೆಯಲ್ಲಿನ ತೀರ್ಮಾನದಂತೆ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಸಿಒ 118 ಸಿಎಲ್ಎಮ್ 2025, ಬೆಂಗಳೂರು, ದಿನಾಂಕ:27-11-2025.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರ ಪ್ರಕರಣ 121 ರಡಿ ಸರ್ಕಾರಕ್ಕೆ ದತ್ತವಾಗಿರುವ ಅಧಿಕಾರದನ್ವಯ ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿ., ಬೆಂಗಳೂರು ಈ ಸಂಸ್ಥೆಗೆ 2025-30 ರ ಅವಧಿಗೆ ದಿನಾಂಕ: 17-12-2025 ರಂದು ಜರುಗಲಿರುವ ಆಡಳಿತ ಮಂಡಳಿಯ ಚುನಾವಣೆಯನ್ನು ಮುಂದಿನ ಆರು ತಿಂಗಳುಗಳ ಕಾಲ ಮುಂದೂಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(**ರಂಗನಾಥ ಜಿ.**)
ಸರ್ಕಾರದ ಅಧೀನ ಕಾರ್ಯದರ್ಶಿ-3
ಸಹಕಾರ ಇಲಾಖೆ

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**